**All India Radio: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.05.2026 / 2.30 p.m.**
**<><><><>**

ಮುಖ್ಯಾಂಶಗಳು

1. ರಾಜ್ಯದ ನಾಲ್ಕು ರಾಜ್ಯಸಭಾ ಸ್ಥಾನಗಳಿಗೆ ಜೂನ್ ೧೮ರಂದು ಚುನಾವಣೆ : ಚುನಾವಣಾ ಆಯೋಗ ಘೋಷಣೆ
2. ಎಬೋಲಾ ವೈರಸ್ ಹಿನ್ನೆಲೆ : ಎಲ್ಲಾ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳಿಗೆ ನಿಗಾವಹಿಸುವಂತೆ ಕೇಂದ್ರ ಸರ್ಕಾರ ಸೂಚನೆ
3. ಎಸ್ಐಆರ್ ವಿರುದ್ಧ ರಾಜ್ಯ ಸರ್ಕಾರ ಕಾನೂನಾತ್ಮಕ ಹೋರಾಟ - ಆರೋಗ್ಯ ಸಚಿವ ದಿನೇಶ್ ಗುಂಡೂರಾವ್
4. ಪ್ರಧಾನಿ ಹಾಗೂ ಕೇಂದ್ರ ಗೃಹ ಸಚಿವರ ವಿರುದ್ಧ ಹೇಳಿಕೆ ಹಿನ್ನೆಲೆ : ರಾಹುಲ್ ಗಾಂಧಿ ಕ್ಷಮೆಯಾಚಿಸುವಂತೆ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ
5. ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಇದೇ ೨೫ರವರೆಗೆ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

<><><><>

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಈರಣ್ಣ ಕಡಾಡಿ, ನಾರಾಯಣ್ ಅವರ ನಿವೃತ್ತಿಯಿಂದ ತೆರವಾಗುವ ರಾಜ್ಯದ ೪ ಸ್ಥಾನ ಸೇರಿ ಒಟ್ಟು ೨೪ ರಾಜ್ಯಸಭಾ ಸ್ಥಾನಗಳಿಗೆ ಚುನಾವಣಾ ಆಯೋಗ ದಿನಾಂಕ ಘೋಷಣೆ ಮಾಡಿದೆ. ಜೂನ್ ೧೮ರಂದು ರಾಜ್ಯಸಭಾ ಚುನಾವಣೆ ನಡೆಯಲಿದ್ದು, ಅಂದೇ ಮತ ಎಣಿಕೆ ಕಾರ್ಯವೂ ನಡೆಯಲಿದೆ. ಜೂನ್ ೮ರಂದು ನಾಮಪತ್ರ ಸಲ್ಲಿಕೆಗೆ ಕಡೆಯ ದಿನವಾಗಿದ್ದು, ಜೂನ್ ೯ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಜೂನ್ ೧೧ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಜೂನ್ ೧ರಂದು ಅಧಿಸೂಚನೆ ಹೊರಡಿಸಲಾಗುವುದು ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ.

<><><><>

ಎಬೋಲಾ ವೈರಸ್ ಹಿನ್ನೆಲೆಯಲ್ಲಿ ವಿಶ್ವ ಆರೋಗ್ಯ ಸಂಸ್ಥೆ ತುರ್ತು ಪರಿಸ್ಥಿತಿ ಘೋಷಣೆ ಮಾಡಿದ್ದು, ದೇಶದಲ್ಲಿ ಕೇಂದ್ರ ಆರೋಗ್ಯ ಇಲಾಖೆ ಹೈಅಲರ್ಟ್ ಘೋಷಿಸಿದೆ. ಎಲ್ಲಾ ರಾಜ್ಯಗಳ ಮುಖ್ಯಕಾರ್ಯದರ್ಶಿಗಳಿಗೆ ಕೇಂದ್ರ ಸರ್ಕಾರ ತುರ್ತು ಪತ್ರ ಬರೆದಿದ್ದು, ನಿಗಾ ವಹಿಸುವಂತೆ

ಸೂಚಿಸಿದೆ. ವಿಮಾನ ನಿಲ್ದಾಣಗಳಲ್ಲಿ ಬಂದರುಗಳಲ್ಲಿ ಪ್ರಯಾಣಿಕರ ತಪಾಸಣೆಗೆ ಕೇಂದ್ರ ಆರೋಗ್ಯ ಸಚಿವಾಲಯ ಕಟ್ಟುನಿಟ್ಟಿನ ಆದೇಶ ನೀಡಿದೆ. ಕಾಂಗೋ, ಉಗಾಂಡ ಹಾಗೂ ದಕ್ಷಿಣ ಸೂಡಾನ್‌ನಿಂದ ಭಾರತಕ್ಕೆ ಆಗಮಿಸುವ ಆ ದೇಶಗಳ ಮೂಲಕ ಪ್ರಯಾಣಿಸುವ ಪ್ರಯಾಣಿಕರ ಬಗ್ಗೆ ನಿಗಾ ಇಡುವಂತೆ ನಿರ್ದೇಶನ ನೀಡಿದೆ. ರಾಜ್ಯ ಆರೋಗ್ಯ ಇಲಾಖೆ ಕ್ವಾರಂಟೈನ್ ಕೇಂದ್ರ ಗುರುತು ಮಾಡಬೇಕು. ಹೆಲ್ತ್ ಸ್ಕ್ರೀನಿಂಗ್ ಸಿಬ್ಬಂದಿಯನ್ನು ಹೆಚ್ಚಳ ಮಾಡಬೇಕು. ಎಬೋಲಾ ಚಿಕಿತ್ಸೆ ಕುರಿತಂತೆ ಆರೋಗ್ಯ ಕಾರ್ಯಕರ್ತರಿಗೆ ಅರಿವು ಮೂಡಿಸುವಂತೆ ಸೂಚಿಸಿದೆ. ಪ್ರಸ್ತುತ ಭಾರತದಲ್ಲಿ ಯಾವುದೇ ಎಬೋಲಾ ಪ್ರಕರಣಗಳು ದಾಖಲಾಗಿಲ್ಲ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಸ್ಪಷ್ಟಪಡಿಸಿದೆ.

<><><>

ವೈದ್ಯಕೀಯ ಕೋರ್ಸ್ ಪ್ರವೇಶಕ್ಕೆ ನೀಟ್ ಬದಲಾಗಿ ಮೊದಲಿನಂತೆ ಸಿಇಟಿ ಪರೀಕ್ಷೆ ನಡೆಯಲಿ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಚುನಾವಣಾ ಆಯೋಗ, ಐಟಿ, ಇಡಿಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ದೂರಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಎಸ್ಐಆರ್‌ನಿಂದಾಗಿ ಈಗಾಗಲೇ ಲಕ್ಷಾಂತರ ಮಂದಿ ಮತದಾನದ ಹಕ್ಕನ್ನು ಕಳೆದುಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಎಸ್ಐಆರ್ ವಿರುದ್ಧ ಕಾನೂನಾತ್ಮಕ ಹೋರಾಟ ಮುಂದುವರಿಸಲಿದೆ ಎಂದು ತಿಳಿಸಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಯಾವುದೋ ಎಐ ಆಧರಿತ ಸಾಫ್ಟ್‌ವೇರ್ ಉಪಯೋಗಿಸಿಕೊಂಡು ಕೆಲವೊಂದು ಮತಗಳನ್ನು ತೆಗೆಯುವ ಕೆಲಸ ಆಗಿದೆ. ಬಿಜೆಪಿಯವರಿಗೆ ಚುನಾವಣೆ ಗೆಲ್ಲುವುದೇ ಮುಖ್ಯವಾಗಿದೆ ಹೊರತು, ದೇಶದ ಆರ್ಥಿಕ ಪರಿಸ್ಥಿತಿ, ವಿದೇಶಾಂಗ ನೀತಿ ಬಗ್ಗೆ ಚಿಂತೆಯಿಲ್ಲ ಎಂದು ದಿನೇಶ್ ಗುಂಡೂರಾವ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><>

ಜುಲೈ ೧ ರಿಂದ ಕೇಂದ್ರೀಯ ಪ್ರೌಢಶಿಕ್ಷಣ ಮಂಡಳಿಯ ೯ನೇ ತರಗತಿಯ ವಿದ್ಯಾರ್ಥಿಗಳಿಗೆ ತ್ರಿಭಾಷಾ ಅಧ್ಯಯನವನ್ನು ಕಡ್ಡಾಯಗೊಳಿಸುವ ಹೊಸ ನೀತಿಯನ್ನು ಪ್ರಶ್ನಿಸಿ ಸರ್ವೋಚ್ಛನ್ಯಾಯಾಲಯದಲ್ಲಿ ಇಂದು ಅರ್ಜಿ ಸಲ್ಲಿಸಲಾಗಿದೆ. ವಿದ್ಯಾರ್ಥಿಗಳು ಮತ್ತು ಪೋಷಕರು ಸಲ್ಲಿಸಿದ್ದ ಅರ್ಜಿಯನ್ನು ಪರಿಶೀಲಿಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠ ಮುಂದಿನ ವಾರ ವಿಚಾರಣೆ ನಡೆಸಲು ಒಪ್ಪಿಕೊಂಡಿದೆ. ಕೇಂದ್ರ ಮಾಧ್ಯಮಿಕ ಶಿಕ್ಷಣ ಮಂಡಳಿಯು ಹೊರಡಿಸಿದ ಸುತ್ತೋಲೆಯಲ್ಲಿ ೯ನೇ ತರಗತಿಯ ವಿದ್ಯಾರ್ಥಿಗಳು ಜುಲೈ ೧ ರಿಂದ ಮೂರು ಭಾಷೆಗಳನ್ನು ಅಧ್ಯಯನ ಮಾಡಬೇಕು. ಅವುಗಳಲ್ಲಿ ಕನಿಷ್ಠ ೨ ಸ್ಥಳೀಯ ಭಾಷೆಗಳಾಗಿರಬೇಕು

ಎಂದು ತಿಳಿಸಿದೆ. ಈ ಸುತ್ತೋಲೆಯನ್ನು ವಿರೋಧಿಸಿದ ಹಿರಿಯ ವಕೀಲ ಮುಕುಲ್ ರೊಹಟಗಿ ೯ನೇ ತರಗತಿಯಲ್ಲಿ ಹೆಚ್ಚುವರಿ ೨ ಭಾಷೆಗಳನ್ನು ಕಲಿಯುವುದು, ೧೦ನೇ ತರಗತಿಯ ಬೋರ್ಡ್ ಪರೀಕ್ಷೆಗಳ ತಯಾರಿಕೆಗೆ ಅಡ್ಡಿಯಾಗಲಿದೆ ಎಂದು ವಾದಿಸಿದರು. ಇದು ವಿದ್ಯಾರ್ಥಿಗಳ ಮೇಲೆ ಹೊರೆಯಾಗಲಿದೆ ಎಂದು ನ್ಯಾಯಾಲಯಕ್ಕೆ ಮನವರಿಕೆ ಮಾಡಿದರು.

ವಾದ ಆಲಿಸಿದ ನ್ಯಾಯಪೀಠ ಮುಂದಿನ ವಾರ ವಿಚಾರಣೆಗೆ ಈ ವಿಷಯವನ್ನು ಪಟ್ಟಿ ಮಾಡುವುದಾಗಿ ತಿಳಿಸಿದೆ.

<><><>

ಪ್ರಧಾನಿ ನರೇಂದ್ರಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ನೀಡಿದ ಹೇಳಿಕೆ ಹಿನ್ನಲೆಯಲ್ಲಿ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ, ಕ್ಷಮೆಯಾಚಿಸುವಂತೆ ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಂವಿಧಾನ ಬದ್ಧವಾಗಿ ಮೂರು ಬಾರಿ ದೇಶದ ಪ್ರಧಾನಿಯಾಗಿ ಆಯ್ಕೆಯಾಗಿರುವ ಪ್ರಧಾನಿ ಮೋದಿ ಅವರನ್ನು ವಿಶ್ವವೇ ಕೊಂಡಾಡುತ್ತಿದೆ. ಇಂತಹ ಸಂದರ್ಭದಲ್ಲಿ ದೇಶದ ಪ್ರಧಾನಿ ಮತ್ತು ಗೃಹಸಚಿವರ ಬಗ್ಗೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಕೀಳುಮಟ್ಟದಲ್ಲಿ ಮಾತನಾಡಿರುವುದು ಸಾಂವಿಧಾನಿಕ ಹುದ್ದೆಗಳಿಗೆ ಮಾಡಿರುವ ಅವಮಾನ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><>

ಅಧಿಕಾರಿಗಳು ಸಮಾಜದ ಒಳಿತಿಗಾಗಿ ನ್ಯಾಯದ ಪರವಾಗಿ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಮಂಡ್ಯ ತಾಲ್ಲೂಕಿನ ಬಾಕಿ ಇರುವ ಪ್ರಕರಣಗಳ ವಿಚಾರಣೆ ಮತ್ತು ವಿಲೇವಾರಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಧಿಕಾರಿಗಳು ಕಾನೂನು ಬದ್ಧವಾಗಿ ಹಾಗೂ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಲು ಕರೆ ನೀಡಿದ್ದಾರೆ. ಲೋಕಾಯುಕ್ತ ಸಂಸ್ಥೆಯನ್ನು ಬಲಹೀನ ಮಾಡಲು ಯಾರಿಂದಲೂ ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಇದಕ್ಕೂ ಮೊದಲು ಜಿಲ್ಲೆಯ ಬಂದಿಗೌಡ ಬಡಾವಣೆ ೨ನೇ ಕ್ರಾಸ್ ನಲ್ಲಿರುವ ಡಾ. ಬಿ. ಆರ್ ಅಂಬೇಡ್ಕರ್ ವಿದ್ಯಾರ್ಥಿನಿಯರ ವಸತಿ ನಿಲಯ ಹಾಗೂ ವಾಲ್ಮೀಕಿ ವಸತಿ ನಿಲಯಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳ ಸಮಸ್ಯೆಗಳ ಅಹವಾಲು ಸ್ವೀಕರಿಸಿದರು. ೧೫ ದಿನಗಳಲ್ಲಿ ವಿದ್ಯಾರ್ಥಿನಿಲಯವನ್ನು ವರ್ಗಾವಣೆ ಮಾಡುವಂತೆ ಹಾಗೂ ವಸತಿ ನಿಲಯದ ಅಡುಗೆ ಸಿಬ್ಬಂದಿ ಹಾಗೂ ವಾರ್ಡನ್ ಅವರನ್ನು ಶೀಘ್ರವೇ ಬದಲಾಯಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

ಜಿಬಿಎ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗದಲ್ಲಿ ಶೇಖರಿಸಲಾಗಿರುವ ಮರದ ರೆಂಬೆ-ಕೊಂಬೆ ಹಾಗೂ ಇತರೆ ಮರದ ಅವಶೇಷಗಳನ್ನು ವಿಲೇವಾರಿ ಮಾಡಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ನಿನ್ನೆ ಸುರಿದ ಮಳೆಯಿಂದಾಗಿ ಬಹಳಷ್ಟು ಮರಗಳು ಧರೆಗುರುಳಿವೆ. ಸಾರ್ವಜನಿಕರ ಹಿತದೃಷ್ಟಿಯಿಂದ ನಗರ ಪಾಲಿಕೆಗಳು ತಮ್ಮ ವ್ಯಾಪ್ತಿಯಲ್ಲಿರುವ ಸಣ್ಣಪುಟ್ಟ ಮರದ ಕೊಂಬೆಗಳು ಹಾಗೂ ಇತರೇ ಅವಶೇಷಗಳನ್ನು ಶ್ರೇಡಿಂಗ್ ಯಂತ್ರಗಳನ್ನು ನಿಯೋಜಿಸುವ ಮೂಲಕ ತ್ಯಾಜ್ಯವನ್ನು ಕಾಂಪೋಸ್ಟ್ ಘಟಕಕ್ಕೆ ಸಾಗಿಸುವಂತೆ ನಿರ್ದೇಶನ ನೀಡಿದ್ದಾರೆ. ಜಿಬಿಎ ವ್ಯಾಪ್ತಿಯಲ್ಲಿ ನಿನ್ನೆ ಸುರಿದ ಮಳೆಯಿಂದಾಗಿ ೧೩೧ ಮರ, ೧೯೨ ಮರದ ರೆಂಬೆ-ಕೊಂಬೆಗಳು ಧರೆಗುರುಳಿವೆ ಎಂದು ಜಿಬಿಎ ಪ್ರಕಟಣೆಯಲ್ಲಿ ತಿಳಿಸಿದೆ.

<><><>

ಕೋಲಾರ ಜಿಲ್ಲೆಯ ಮಾಲೂರು ತಾಲೂಕಿನ ಮಾಸ್ತಿ ಹೋಬಳಿಯಲ್ಲಿ ಕಳೆದ ರಾತ್ರಿ ಸುರಿದ ಬಿರುಗಾಳಿ ಸಮೇತ ಮಳೆಯಿಂದಾಗಿ ಮರಗಳು ಬೆಸ್ಕಾಂ ಇಲಾಖೆಯ ವಿದ್ಯುತ್ ಕಂಬಗಳ ಮೇಲೆ ಉರುಳಿ ಬಿದ್ದ ಪರಿಣಾಮ, ತಿಪ್ಪಸಂದ್ರ, ಎಂ.ಹೊಸಹಳ್ಳಿ ಕ್ರಾಸ್, ಗೊಲ್ಲಹಳ್ಳಿ, ಬೆಡ್ ಶೆಟ್ಟಿಹಳ್ಳಿ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತಯ ಉಂಟಾಗಿದೆ. ಬೆಸ್ಕಾಂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ದುರಸ್ತಿಯಲ್ಲಿ ತೊಡಗಿದ್ದಾರೆ. ಇಂದು ಸಂಜೆಯೊಳಗೆ ಸಮರ್ಪಕ ವಿದ್ಯುತ್ ಪೂರೈಕೆಗೆ ವ್ಯವಸ್ಥೆ ಮಾಡಲಾಗುವುದು ಎಂದು ಬೆಸ್ಕಾಂ ಸಹಾಯಕ ಕಾರ್ಯ ಪಾಲಕ ಅಭಿಯಂತರ ಅನ್ವರ್ ಪಾಷ ತಿಳಿಸಿದ್ದಾರೆ.

<><><>

ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ನೇಮಕಗೊಂಡ ಯುವಕರಿಗೆ ನಾಳೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಧಾನಿ ನರೇಂದ್ರ ಮೋದಿ ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಇದೇ ವೇಳೆ ಅವರು, ಈ ಯೋಜನೆಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬೆಂಗಳೂರಿನಲ್ಲಿ ನಡೆಯುವ ಸಮಾರಂಭದಲ್ಲಿ ಕೇಂದ್ರ, ಸಣ್ಣ, ಅತಿಸಣ್ಣ, ಮಧ್ಯಮ ಕೈಗಾರಿಕಾ ಸಚಿವೆ ಶೋಭಾ ಕರಂದ್ಲಾಜೆ, ನೇಮಕಾತಿ ಪತ್ರ ವಿತರಿಸಲಿದ್ದಾರೆ.

<><><>

ರಾಜ್ಯದ ಕರಾವಳಿ, ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡಿನ ಕೆಲ ಜಿಲ್ಲೆಗಳಲ್ಲಿ ಇಂದು ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಬೆಂಗಳೂರಿನಲ್ಲಿ ಇದೇ ೨೫ರವರೆಗೆ ಮಳೆ ಮುಂದುವರಿಯಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ರಾಜಧಾನಿಯಲ್ಲಿ ನಿನ್ನೆ ಸುರಿದ ಮಳೆಗೆ ಹಲವೆಡೆ ಮರಗಳು ಉರುಳಿ ವಿದ್ಯುತ್ ವ್ಯತ್ಯಯ

ಉಂಟಾಗಿದೆ. ಹಲವು ಪ್ರದೇಶಗಳಲ್ಲಿ ಮಧ್ಯರಾತ್ರಿ ವೇಳೆಗೆ ಮಳೆ ತೀವ್ರಗೊಂಡಿದ್ದು, ಬಿರುಗಾಳಿಗೆ ಮರಗಳು ಉರುಳಿವೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>